**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೇಶವ ಪ್ರಸಾದ ಎಸ್. ರವರು ನಿಯಮ 72ರಡಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ:**

****************************************************************************************

**ಪ್ರಶ್ನೆ:**

ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕಿನ ಬನಹಳ್ಳಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಗೊಂಡ್ಲಹಳ್ಳಿಯಲ್ಲಿ ಕಂದಾಯ ಇಲಾಖೆಗೆ ಸಂಬಂಧಿಸಿದ 15 ಹೆಕ್ಟೇರ್ ಗೋಮಾಳ ಜಮೀನು ಇದ್ದು, ಈ ಜಮೀನಿನಲ್ಲಿ 1995-96 ನೇ ಸಾಲಿನಲ್ಲಿ ಅರಣ್ಯ ಇಲಾಖೆಯವರು ವಿವಿಧ ಜಾತಿಯ ಅರಣ್ಯ ಮರಗಳನ್ನು ನೆಟ್ಟು 3 ವರ್ಷಗಳ ಕಾಲ ಪೋಷಿಸಿ, 1998 ರಲ್ಲಿ ಬನಹಳ್ಳಿ ಗ್ರಾಮ ಪಂಚಾಯಿತಿಗೆ ಮರಗಳನ್ನು ನಿರ್ವಹಣೆ ಮಾಡಲು ನೀಡಿರುತ್ತಾರೆ. ಸದರಿ ಜಮೀನಿನಲ್ಲಿ ಕಾಲ ಕ್ರಮೇಣ ಅಕ್ರಮವಾಗಿ ಗಣಿಗಾರಿಕೆ ನಡೆಯುತ್ತಿದ್ದು, ಈ ಅಕ್ರಮ ಗಣಿಗಾರಿಕೆಯನ್ನು ತಡೆಗಟ್ಟಿ, ಸದರಿ ಗಣಿಗಾರಿಕೆ ನಡೆಸುತ್ತಿರುವ 15 ಹೆಕ್ಟೇರ್ ಗೋಮಾಳವನ್ನು ಸಂರಕ್ಷಿಸುವ ಬಗ್ಗೆ.

**ಉತ್ತರ:**

ಕೋಲಾರ ಜಿಲ್ಲೆ, ಮಾಲೂರು ತಾಲ್ಲೂಕು, ಟೇಕಲ್ ಹೋಬಳಿ, ಬನಹಳ್ಳಿ ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿನ ಗೊಂಡ್ಲಹಳ್ಳಿ ಗ್ರಾಮವು ಮಜರಾ ಗ್ರಾಮವಾಗಿರುತ್ತದೆ. ಸದರಿ ಗೊಂಡ್ಲಹಳ್ಳಿ ಮಜರಾ ಗ್ರಾಮವು ಕಣಗಲ ಗ್ರಾಮದ ವ್ಯಾಪ್ತಿಯಲ್ಲಿರುತ್ತದೆ. ಬನಹಳ್ಳಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಕಣಗಲ ಗ್ರಾಮ (ಮಜರಾ ಗೊಂಡ್ಲಹಳ್ಳಿ) ವ್ಯಾಪ್ತಿಯ ಹರದಕೊತ್ತೂರು, ಅಣಿಮಿಟ್ನಹಳ್ಳಿ ಗ್ರಾಮಗಳ ವ್ಯಾಪ್ತಿಯಲ್ಲಿನ ಸರ್ವೆ ನಂ. 33 ಹಾಗೂ ಸರ್ವೆ ನಂ.30 ರ 112-32 ಎಕರೆ ಪ್ರದೇಶದಲ್ಲಿ ಸರ್ಕಾರದ ಕಂದಾಯ ಇಲಾಖೆ ಸುತ್ತೋಲೆ ಸಂಖ್ಯೆ: RD 72 LGP 98, ದಿನಾಂಕ 24.02.1999 ರಲ್ಲಿನ ನಿರ್ದೇಶನದಂತೆ ಹಾಗೂ ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994ರ ನಿಯಮ 8(5) ರಂತೆ ಕಂದಾಯ ಮತ್ತು ಅರಣ್ಯ ಇಲಾಖೆಗಳ ನಿರಾಕ್ಷೇಪಣಾ ಪತ್ರಗಳನ್ನು ಪಡೆದು ಒಟ್ಟು 27 ಕಲ್ಲುಗಣಿ ಗುತ್ತಿಗೆಗಳನ್ನು ಮಂಜೂರು ಮಾಡಲಾಗಿರುತ್ತದೆ. ಕರ್ನಾಟಕ ಕಲ್ಲುಪುಡಿ ಮಾಡುವ ಘಟಕಗಳ ನಿಯಂತ್ರಣ ಅಧಿನಿಯಮ, 2011 ಮತ್ತು ನಿಯಮಗಳು, 2012 ರಂತೆ 12 ಸ್ಟೋನ್ ಕ್ರಷರ್ ಘಟಕಗಳಿಗೆ ಲೈಸೆನ್ಸ್ ನೀಡಲಾಗಿರುತ್ತದೆ.

ಕಂದಾಯ ಮತ್ತು ಅರಣ್ಯ ಇಲಾಖೆ ನಿರಾಕ್ಷೇಪಣಾ ಪತ್ರಗಳಲ್ಲಿ ಕಲ್ಲುಗಣಿ ಗುತ್ತಿಗೆ ಮಂಜೂರಾತಿ ನೀಡಿರುವ ಪ್ರದೇಶಗಳಲ್ಲಿ ನೆಡುತೋಪು ಇರುವ ಬಗ್ಗೆಯಾಗಲೀ, ಗಿಡಮರಗಳು ಇರುವ ಬಗ್ಗೆಯಾಗಲೀ ಯಾವುದೇ ಪ್ರಸ್ತಾಪ ಇರುವುದಿಲ್ಲ.

ಕೋಲಾರ ಜಿಲ್ಲೆ, ಮಾಲೂರು ತಾಲ್ಲೂಕು, ಟೇಕಲ್ ಹೋಬಳಿ, ಹರದಕೊತ್ತೂರು, ಅನಿಮಿಟ್ನಹಳ್ಳಿ, ಕಣಗಲ ಹಾಗೂ ಬನಹಳ್ಳಿ ಮತ್ತು ಇತರೇ ಗ್ರಾಮಗಳ ಸರ್ಕಾರಿ ಗೋಮಾಳ ಜಮೀನುಗಳಲ್ಲಿ ಮಂಜೂರು ಮಾಡಿರುವ ಕಲ್ಲುಗಣಿ ಗುತ್ತಿಗೆ ಪ್ರದೇಶಗಳಲ್ಲಿ ಗುತ್ತಿಗೆದಾರರು ಅನಧಿಕೃತವಾಗಿ ಉಪಖನಿಜ ತೆಗೆದು ಸಾಗಾಣಿಕೆ ಮಾಡುತ್ತಿರುವ ಬಗ್ಗೆ ದೂರುಗಳು ಬಂದ ಹಿನ್ನೆಲೆಯಲ್ಲಿ 2017-18 ನೇ ಸಾಲಿನಲ್ಲಿ ಚಾಲ್ತಿಯಲ್ಲಿದ್ದ 22 ಕಲ್ಲುಗಣಿ ಗುತ್ತಿಗೆ ಪ್ರದೇಶಗಳನ್ನು DGPS / Drone ಸರ್ವೆ ಕಾರ್ಯ ಕೈಗೊಂಡು, ಗುತ್ತಿಗೆ ಪ್ರದೇಶದಲ್ಲಿ ಸಂಚಿತ ಆಡಿಟ್ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ತೆಗೆದು ಸಾಗಾಣಿಕೆ ಮಾಡಿರುವ ಉಪ ಖನಿಜವನ್ನು ಅಂದಾಜಿಸಲಾಗಿರುತ್ತದೆ.

...2

ಈ ರೀತಿ ಗುತ್ತಿಗೆದಾರರು 31,75,944 ಮೆಟ್ರಿಕ್ ಟನ್ ಕಟ್ಟಡ ಕಲ್ಲನ್ನು ಖನಿಜ ರವಾನೆ ಪರವಾನಿಗೆ ಇಲ್ಲದೆ ಸಾಗಾಣಿಕೆ ಮಾಡಿರುವುದು ಕಂಡುಬಂದಿದ್ದು, ಈ ಸಂಬಂಧ ರಾಜಧನದ 05 ಪಟ್ಟು ದಂಡ ₹ 95.27 ಕೋಟಿಗಳನ್ನು ವಿಧಿಸಲಾಗಿರುತ್ತದೆ. ಈ ಪೈಕಿ ಗುತ್ತಿಗೆದಾರರಿಂದ ₹12.60 ಕೋಟಿಗಳ ದಂಡವನ್ನು ಸಂಗ್ರಹಿಸಲಾಗಿರುತ್ತದೆ. 06 ಕಟ್ಟಡ ಕಲ್ಲುಗಣಿ ಗುತ್ತಿಗೆದಾರರು ದಂಡವನ್ನು ಪಾವತಿಸದ ಕಾರಣ ಸದರಿಯವರು ಹೊಂದಿರುವ ಗುತ್ತಿಗೆಗಳನ್ನು ರದ್ದುಪಡಿಸಲಾಗಿರುತ್ತದೆ.

2018-19ನೇ ಸಾಲಿನಲ್ಲಿ Drone / DGPS ಸಮೀಕ್ಷೆ ವರದಿಯನ್ನು ಪ್ರಶ್ನಿಸಿ ಕೆಲವು ಕಲ್ಲುಗಣಿ ಗುತ್ತಿಗೆದಾರರು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿಗಳನ್ನು ದಾಖಲಿಸಿರುತ್ತಾರೆ. ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಿಸಿದ್ದ ರಿಟ್ ಅರ್ಜಿ ಸಂಖ್ಯೆ: 29870/2019 ಎಸ್.ಎನ್.ಶ್ರೀನಿವಾಸ ಶೆಟ್ಟಿ ವಿರುದ್ಧ ರಾಜ್ಯ ಸರ್ಕಾರ ಪ್ರಕರಣದ ಆದೇಶ ದಿನಾಂಕ 03.12.2019 ರಲ್ಲಿ, ಕಲ್ಲುಗಣಿ ಗುತ್ತಿಗೆ ಪ್ರದೇಶಗಳಲ್ಲಿ ತೆಗೆದಿರುವ ಉಪಖನಿಜದ ಪ್ರಮಾಣವನ್ನು ಡ್ರೋಣ್ ಉಪಕರಣದ ಸಹಾಯದಿಂದ ಸರ್ವೆ ಕಾರ್ಯ ನಡೆಸಿರುವ ಕ್ರಮವನ್ನು ಎತ್ತಿ ಹಿಡಿದು ಕಲ್ಲುಗಣಿ ಗುತ್ತಿಗೆದಾರರ ಸಮ್ಮುಖದಲ್ಲಿ ಮತ್ತೊಮ್ಮೆ ಡ್ರೋಣ್ ಸರ್ವೆ ಕಾರ್ಯ ನಡೆಸಿ ಸದರಿಯವರು ಹೆಚ್ಚುವರಿಯಾಗಿ ಉಪಖನಿಜ ತೆಗೆದು ಸಾಗಾಣಿಕೆ ಮಾಡಿದ್ದಲ್ಲಿ, ದಂಡ ಸಂಗ್ರಹಿಸಲು ಅಗತ್ಯ ಕ್ರಮಜರುಗಿಸುವಂತೆ ನಿರ್ದೇಶಿಸಿ 2018-19ನೇ ಸಾಲಿನ ಡ್ರೋಣ್ ಸರ್ವೆ ವರದಿಯಂತೆ ಕಲ್ಲುಗಣಿ ಗುತ್ತಿಗೆದಾರರಿಗೆ ಇಲಾಖೆಯಿಂದ ದಂಡ ಪಾವತಿಸುವಂತೆ ಸೂಚಿಸಿ ಜಾರಿ ಮಾಡಿರುವ ನೋಟೀಸ್‌ಗಳನ್ನು ವಜಾಗೊಳಿಸಲಾಗಿರುತ್ತದೆ.

ಮಾನ್ಯ ಉಚ್ಚನ್ಯಾಯಾಲಯದ ನಿರ್ದೇಶನದನ್ವಯ, ಕರ್ನಾಟಕ ರಾಜ್ಯ ದೂರ ಸಂವೇದಿ ಕೇಂದ್ರದಿಂದ (KSRSAC) ಡ್ರೋಣ್ / ಡಿ.ಜಿ.ಪಿ.ಎಸ್ ಸರ್ವೆ ಕಾರ್ಯ ಕೈಗೊಳ್ಳಲು ಚರ್ಚಿಸಲಾಗಿದ್ದು, ಮತ್ತೊಮ್ಮೆ ಡ್ರೋಣ್ ಸರ್ವೆ ಕಾರ್ಯ ಕೈಗೊಂಡು ಗುತ್ತಿಗೆ ಪ್ರದೇಶದಲ್ಲಿ ಸಂಚಿತ ಆಡಿಟ್ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ತೆಗೆದಿರುವ ಖನಿಜವನ್ನು ಮರು ಅಂದಾಜಿಸಿ ದಂಡ ವಸೂಲಾತಿಗೆ ಕ್ರಮವಹಿಸಲಾಗುತ್ತಿದೆ.

~~ಸಂಖ್ಯೆ: ಸಿಐ-ಎಂಎಂಎನ್/383/2022~~

Halappa BA

**(ಆಚಾರ್ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು
ವಿಕಲಚೇತನರ, ಹಿರಿಯ ನಾಗರಿಕರ
ಸಬಲೀಕರಣ ಸಚಿವರು.

C 106